ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಯಾದಗಿರಿ ಜಿಲ್ಲೆಯ ಕಡೆಚೂರು ಕೈಗಾರಿಕಾ ಪ್ರದೇಶಗಳಲ್ಲಿ ಸ್ಥಳೀಯರಿಗೆ ಉದ್ಯೋಗವಕಾಶ

ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

254 (169) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಯಾದಗಿರಿ ಜಿಲ್ಲೆಯ ಕಡೆಚೂರು ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಎಷ್ಟು ಎಕರೆ ಭೂಮಿಯನ್ನು ನೀಡಲಾಗಿದೆ ;

(ಆ) ಯಾದಗಿರಿ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತಮ ಅವಕಾಶಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೈಗಾರಿಕೆಗಳನ್ನು ಸ್ಥಾಪಿಸಿ ಉದ್ಯೋಗ ಅರಸಿ ವಲಸೆ ಹೋಗುತ್ತಿರುವ ಯುವ ಜನತೆಗೆ ಸ್ಥಳೀಯವಾಗಿ ಉದ್ಯೋಗ ನೀಡಲು ಸರ್ಕಾರ ಕ್ರಮ ವಹಿಸುವುದೇ ? (ವಿವರ ನೀಡುವುದು)